<u>ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾಯದಂಡಾಧಿಕಾರಿಯವರ ನ್ಯಾಯಾಲಯ, ಪೊನ್ನಂಪೇಟೆ.</u>

# <u>ಕ್ರಿಮಿನಲ್ ಮೊಕದ್ದಮೆ ಸಂಖ್ಯೆ 1013/2021</u>.

ಫ್ರಾ.ಸಾ. : 7

ಚಾ.ಸಾ. : 8

| | | |
|---|---|---|
| ಹೆಸರು | : | ಮಂಜುನಾಥ್ |
| ತಂದೆಯ ಹೆಸರು | : | ಸೋಮಯ್ಯ |
| ವಯಸ್ಸು | : | 31 ವರ್ಷ |
| ಉದ್ಯೋಗ | : | ಖಾಸಗಿ ಕೆಲಸ |
| ವಿಳಾಸ | : | ನಿಡುಗುಂಬ ಗ್ರಾಮ |

... ............................................................................................................ ...

ದಿನಾಂಕ 01 ನೇ ಜುಲೈ 2024 ರಂದು ಸಾಕ್ಷಿಯನ್ನು ಕರೆಸಲಾಯಿತು ಮತ್ತು ಪ್ರಮಾಣ ವಚನ ಬೋಧಿಸಲಾಯಿತು.

<u>ಮುಖ್ಯ ವಿಚಾರಣೆಃ- ಮಾನ್ಯ ಸ ಸ ಅ ರವರಿಂದ</u> :-

ಈಗ ತೋರಿಸಿದ ದಾಖಲೆಯಲ್ಲಿ ನನ್ನ ಸಹಿ ಇದೆ, ಸಾಕ್ಷಿಯು ಗುರುತಿಸಿರುವ ದಾಖಲೆಯು ಸ್ವತ್ತು ಅಮಾನತ್ತು ಮಹಜರ್ ಆಗಿದ್ದು ಅದನ್ನು ನಿ ಪಿ 10 ಎಂದು, ಈಗಾಗಲೇ ಗುರುತಿಸಲಾಗಿದ್ದು ಸಾಕ್ಷಿಯ ಸಹಿ ನಿ ಪಿ 10 ಬಿ ಎಂದು ಗುರುತಿಸಲಾಯಿತು. ನಿ ಪಿ 10 ಕ್ಕೆ ದಿ. 27.07.2021 ರಂದು ಗೋಣಿಕೊಪ್ಪ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿದ್ದೇನೆ. ಪೊಲೀಸರು ನನಗೆ ಪರಿಚಯವಿದ್ದು ಮಾತನಾಡಲು ಹೋ ೀದಾಗ ನನ್ನ ಸಹಿ ಪಡೆದರು. ಈಗ ತೋರಿಸಿದ ದಾಖಲೆಯಲ್ಲಿ ನನ್ನ ಸಹಿ ಇದೆ, ಸಾಕ್ಷಿಯು ಗುರುತಿಸಿರುವ ದಾಖಲೆಯು ಸ್ವತ್ತು ಬಿಡುಗಡೆ ಮಹಜರ್ ಆಗಿದ್ದು ಅದನ್ನು ನಿ ಪಿ 15 ಎಂದು, ಸಾಕ್ಷಿಯ ಸಹಿಯನ್ನು ನಿ ಪಿ 15 ಎ ಎಂದು ಗುರುತಿಸಲಾಯಿತು. ಈಗ ತೋರಿಸಿದ ದಾಖಲೆಯಲ್ಲಿ ನನ್ನ ಸಹಿ ಇದೆ, ಸಾಕ್ಷಿಯು ಗುರುತಿಸಿರುವ ದಾಖಲೆಯು ಫೋಟೊ ಆಗಿದ್ದು ಅದನ್ನು ನಿ ಪಿ 16 ಎಂದು, ಸಾಕ್ಷಿಯ ಸಹಿಯನ್ನು ನಿ ಪಿ 16 ಎ ಎಂದು ಗುರುತಿಸಲಾಯಿತು. ಪೊಲೀಸರಿಗೆ ನಾನು ಹೇಳಿಕೆ ನೀಡಿರುವುದಿಲ್ಲ. ನನ್ನ ಸಮಕ್ಷಮ ಯಾವುದೇ ಮಹಜರ್ ಮಾಡಿಲ್ಲ, ನಾನು ಪೊಲಿಸರಿಗೆ ಯಾವುದೇ ಕೃತ್ಯ ಸ್ಥಳವನ್ನು ತೋರಿಸಿಲ್ಲ, ಏನನ್ನೂ ಅಮಾನತ್ತುಪಡಿಸಿಕೊಂಡಿಲ್ಲ.

(ಈ ಹಂತದಲ್ಲಿ ಸ.ಸ.ಅ.ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸುವಂತೆ ಕೋರಿಕೊಂಡ ಮೇರೆಗೆ ದಾಖಲೆಗಳನ್ನು ಪರಿಶೀಲಿಸಿ ಹಾಗೂ ಸ.ಸ.ಅ.ರವರ ವಾದವನ್ನು ಆಲಿಸಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅವಕಾಶ ನೀಡಲಾಯಿತು.)

<u>ಪಾಟೀ ಸವಾಲು: - ಮಾನ್ಯ ಸ ಸ ಅ ರವರಿಂದ</u> : -

ನಿ. 27.07.2021 ರಂದು 2 ನೇ ಆರೋಪಿ ಪೊ. ಠಾಣೆಗೆ ಹಾಜರಾಗಿ Splender ಬೈಕ್ ಅನ್ನು ಹಾಜರುಪಡಿಸಿದರು ಎಂದರೆ ನನಗೆ ಗೊತ್ತಿಲ್ಲ. ಆಗ ಪೊಲೀಸರು ನನ್ನ ಸಮಕ್ಷಮ 19.30 ಗಂಟೆ ಸಮಯದಲ್ಲಿ ಮಹಜರ್ ಮಾಡಿ ಕೆ ಎ 45 ವೈ 1269 Splender plus ಮೋಟರ್ ಬೈಕ್ ಅನ್ನು ಅಮಾನತುಪಡಿಸಿದರು ಎಂದರೆ ಸರಿಯಲ್ಲ. ಆಗ ನಾನು ನಿಪಿ 10 ಕ್ಕೆ ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ.

ದಿ. 06.08.2021 ರಂದು ನನ್ನ ಸಮಕ್ಷಮ ಮಹಜರ್ ಮಾಡಿ Splender plus ಮೋಟರ್ ಬೈಕ್ ಅನ್ನು ದೇವರಾಜ್ ರವರಿಗೆ ನನ್ನ ಸಮಕ್ಷಮ ಮಹಜರ್ ಅನ್ನು ಸಂಜೆ 4 ರಿಂದ 4.30 ರ ಸಮಯದಲ್ಲಿ ಮಾಡಿ ಬಿಡುಗಡೆ ಮಾಡಿದರು ಎಂದರೆ ನನಗೆ ಗೊತ್ತಿಲ್ಲ. ಆಗ ನಾನು ನಿಪಿ 15 ಕ್ಕೆ ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ. ಮೇಲೆ ಹೇಳಿದಂತೆ ಈ ಬಗ್ಗೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಈಗ ಎಲ್ಲ ವಿಚಾರ ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಿರಾಕರಿಸಿದ ಹೇಳಿಕೆಯನ್ನು ನಿ ಪಿ 17 ಎಂದು ಗುರುತಿಸಲಾಯಿತು.

<u>ಪಾಟೀ ಸವಾಲು</u> :- ಆರೋಪಿತರ ಪರ ವಕೀಲರವರಿಂದ :-

ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

<u>ಮರುವಿಚಾರಣೆ</u> :- - ಇಲ್ಲ -

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿದಾರರ ಹೇಳಿಕೆಯನ್ನು ನನ್ನ ಉಖ್ತುಲೇಖನದಂತೆ ಗಣಕಯಂತ್ರದಲ್ಲಿಬೆರಳಚ್ಚು ಮಾಡಿಸಲಾಗಿರುತ್ತದೆ)
ಓದಿ ಹೇಳಿ ಕೇಳಿಸಿ ಸರಿ ಇದೆ ಎಂದು ಒಪ್ಪಿದೆ.

Sd/xxx-
ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ.,ಪೊನ್ನಂಪೇಟೆ.

(ಸಾಕ್ಷಿಯವರ ಸಹಿ)